**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.925/2023.**

ಪಿರ್ಯಾದುದಾರರುಃ- ಸೇಂಟ್ ಮಿಲಾಗ್ರೀಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್
ಸೊಸೈಟಿ ಲಿಮಿಟೆಡ್., ಹಳದೀಪುರ ಶಾಖೆ,
ಪ್ರತಿನಿಧಿಸುವವರು,
ಶ್ರೀ ಅಭಿಷೇಕ ಆನಂದ ಮಾಸ್ತಿಕಟ್ಟೆ, ,
ನಿಷ್ಪತ್ ಮೆನೇಜರ್ ,
ತಾಲೂಕುಃ- ಹೊನ್ನಾವರ (ಉ.ಕ.).

**-ವಿರುದ್ಧ-**

ಆರೋಪಿಯ ಹೆಸರುಃ- ರಹೀನ ಮೊಹಮ್ಮದ ಗುರ್ಕಾರ ,
ವಯಸ್ಸು ಸುಮಾರುಃ- 26 ವರ್ಷ,
ಸಾಕೀನಃ- ಮುಸ್ಲಿಂಕೇರಿ ,
ಅಂಚೆಃ- ಹೆರಂಗಡಿ ,
ತಾಲೂಕುಃ- ಹೊನ್ನಾವರ (ಉ.ಕ.).

**ಆಪಾದನೆ**

ಶ್ರೀ ಈರಣ್ಣ ಹುಣಶಿಕಟ್ಟಿ, ಬಿ.ಕಾಂ., ಎಲ್.ಎಲ್.ಬಿ., ಸಮವರ್ತಿ ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಪಿರ್ಯಾದಿ ಸಂಸ್ಥೆಯಲ್ಲಿ ಅಬ್ದುಲ್ ರಹಮಾನ್ ಅಬುಮೊಹಮ್ಮದ ಸಾಬರವರು BL No. 231 ರಡಿಯಲ್ಲಿ ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ. ಸದರಿ ಸಾಲಕ್ಕೆ ಆರೋಪಿಯಾದ ನೀವು ಜಾಮೀನುದಾರರಾಗಿದ್ದು, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯ ಚೆಕ್ ನಂ.677030 ನ್ನು ದಿನಾಂಕ 17-05-2023 ರಂದು ರೂ.1,96,266/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕಿಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, ಆರೋಪಿಯ ಖಾತೆಯಲ್ಲಿ ಸಾಕಷ್ಟು

ಹಣ ಇರುವುದಿಲ್ಲ 'Funds Insufficient' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 04-07-2023 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 19-07-2023 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸನ್ನು ನೀವು ಸ್ವೀಕರಿಸದೇ ಇರುವ ಕಾರಣ ದಿನಾಂಕ 25-07-2023 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು.

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು.

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ.

**ದಿನಾಂಕಃ- 14-02-2025.**

**(ಈರಣ್ಣ ಹುಣಶಿಕಟ್ಟಿ).,**
**ಸ. ಪ್ರ. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

ಆರೋಪಿಯ ಸಹಿಃ-
ಸಹಿ ಇದೆ.

****